**Akashvani : Bangalore**
**Regional Bulletin In Kannada**
**19.06.2025 / 18.40 hrs**
**ಆಕಾಶವಾಣಿ ಬೆಂಗಳೂರು**
**ಪ್ರದೇಶ ಸಮಾಚಾರ**
**19.06.2025 / 18.40 hrs**

**<><*<><>*><>**

## ಮುಖ್ಯಾಂಶಗಳು

**<><*<><>*><>**

**೧. ವಸತಿ ಯೋಜನೆಯಲ್ಲಿ ಅಲ್ಪ ಸಂಖ್ಯಾತರ ಮೀಸಲಾತಿಯನ್ನು ಶೇಕಡ ೧೦ ರಿಂದ ೧೫ಕ್ಕೇರಿಸಲು ಸಂಪುಟ ಸಭೆಯಲ್ಲಿ ನಿರ್ಧಾರ**

**೨. ವಸತಿ ಯೋಜನೆಯಲ್ಲಿ ಮೀಸಲಾತಿ ನೀಡಿರುವುದು ಸಂವಿಧಾನ ವಿರೋಧಿ - ಬಿಜೆಪಿ ಆಕ್ಷೇಪ**

**೩. ಬೆಂಗಳೂರಿನಲ್ಲಿ ನಾಳೆ ಬಿಜಿಎಸ್‌ನ ನೂತನ ಆಸ್ಪತ್ರೆ ಲೋಕಾರ್ಪಣೆಗೊಳಿಸಲಿರುವ ಕೇಂದ್ರ ಗೃಹ ಸಚಿವ ಅಮಿತ್ ಶಾ**

**೪. ಭಾರತದ ಕಾಫಿ ರಫ್ತು ಶೇಕಡ ೪೦ರಷ್ಟು ವೃದ್ಧಿ ; ಒಡಿಶಾ, ಈಶಾನ್ಯ ರಾಜ್ಯಗಳಲ್ಲಿ ಕಾಫಿ ಬೆಳೆಯುವ ಬಗ್ಗೆ ಪ್ರಯೋಗ**

**೫. ಬೆಂಗಳೂರು ದಕ್ಷಿಣ ತಾಲೂಕು ಕಚೇರಿಗೆ ಕಂದಾಯ ಸಚಿವ ಕೃಷ್ಣ ಬೈರೇಗೌಡ ದಿಢೀರ್ ಭೇಟಿ ; ಅಧಿಕಾರಿಗಳ ಕಾರ್ಯವೈಖರಿ ವಿರುದ್ಧ ಅಸಮಾಧಾನ**

**<><*<><>*><>**

ಸರ್ಕಾರಿ ಯೋಜನೆಗಳ ಗುತ್ತಿಗೆಯಲ್ಲಿ ಮೀಸಲಾತಿ ನೀಡಿದ ಬಳಿಕ ಈಗ ವಸತಿ ಯೋಜನೆಯನ್ನು ಅಲ್ಪ ಸಂಖ್ಯಾತರ ಮೀಸಲಾತಿ ಹೆಚ್ಚಳಕ್ಕೆ ಸರ್ಕಾರ ಮಹತ್ವದ ನಿರ್ಧಾರ ಕೈಗೊಂಡಿದೆ. ವಸತಿ ಯೋಜನೆಯಡಿ ಮುಸ್ಲಿಂ ಸೇರಿದಂತೆ ಇತರೆ ಅಲ್ಪ ಸಂಖ್ಯಾತರಿಗೆ ಮೀಸಲಾತಿಯನ್ನು ಶೇಕಡ ೧೦ ರಿಂದ ೧೫ಕ್ಕೇರಿಸಲು ಸಚಿವ ಸಂಪುಟ ಅನುಮೋದನೆ ನೀಡಿದೆ ಎಂದು ಕಾನೂನು ಸಚಿವ ಎಚ್.ಕೆ. ಪಾಟೀಲ್ ಸುದ್ದಿಗಾರರಿಗೆ ತಿಳಿಸಿದ್ದಾರೆ. ಇದು ಮುಸ್ಲಿಂ, ಜೈನರು, ಕ್ರಿಶ್ಚಿಯನ್ ಎಲ್ಲರಿಗೂ ಅನ್ವಯವಾಗಲಿದೆ ಎಂದು ಸ್ಪಷ್ಟಪಡಿಸಿದ್ದಾರೆ.

ಧ್ವನಿ : ಎಚ್.ಕೆ. ಪಾಟೀಲ್ (೩೦ ಸೆಕೆಂಡ್‌ಗಳು)

ಇದೇ ವೇಳೆ ಕರ್ನಾಟಕ ಲೋಕಾಯುಕ್ತ ಸಂಸ್ಥೆಯಲ್ಲಿ ಖಾಲಿಯಿರುವ ಹಿರಿಯ ಸಹಾಯಕ ಸರ್ಕಾರಿ ಅಭಿಯೋಜಕ ಹುದ್ದೆಗೆ ನಿವೃತ್ತ ಸರ್ಕಾರಿ ಅಭಿಯೋಜಕರನ್ನು ನೇಮಕ ಮಾಡಲು ಸಂಪುಟ ಒಪ್ಪಿಗೆ ಸೂಚಿಸಿದ್ದಾರೆ.

ಉತ್ತರಕನ್ನಡ ಜಿಲ್ಲೆಯ ಹೊನ್ನಾವರ ಸಮುದ್ರ ತೀರದ ೬ ಕಿಲೋಮೀಟರ್‌ವರೆಗಿನ ಪ್ರದೇಶ ಹಾಗೂ ೫ ಸಾವಿರದ ೯೫೫ ಅರಣ್ಯ ಪ್ರದೇಶವನ್ನೊಳಗೊಂಡ ಪ್ರದೇಶವನ್ನು ಅಪ್ಸರಕೊಂಡ-ಮುಗಲಿ ಕಡಲ ವನ್ಯಜೀವಿ ಧಾಮ ಎಂದು ಘೋಷಿಸಲು ಸಂಪುಟ ನಿರ್ಧರಿಸಿದೆ. ಇದೇ ವೇಳೆ ಹಾವೇರಿ ಜಿಲ್ಲೆಯ ಹಾನಗಲ್ ತಾಲೂಕಿನ ಬಸಾಪುರ ಗ್ರಾಮದ ಹೆಸರನ್ನು ಗೇರುಗುಟ್ಟ ಬಸಾಪುರ ಎಂದು ನಾಮಕರಣ ಮಾಡಲು ನಿರ್ಧರಿಸಲಾಗಿದೆ.

**<><*<><>*><>**

ಧರ್ಮಾಧಾರಿತವಾಗಿ ಮೀಸಲಾತಿ ನೀಡಬಾರದು ಎಂದು ಸಂವಿಧಾನದಲ್ಲಿ ಸ್ಪಷ್ಟವಾಗಿ ಹೇಳಿದ್ದರೂ ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಪದೇ ಪದೇ ಉಲ್ಲಂಘಿಸುತ್ತಿದೆ ಎಂದು ಬಿಜೆಪಿ ಆರೋಪಿಸಿದೆ. ವಸತಿ ಯೋಜನೆಯಡಿ ಮುಸ್ಲಿಂರಿಗೆ ಪ್ರತ್ಯೇಕವಾಗಿ ಶೇಡಕ ೧೫ರಷ್ಟು ಮೀಸಲಾತಿ ನೀಡಿರುವುದೂ ಸಂಪೂರ್ಣ ಸಂವಿಧಾನ ವಿರೋಧಿ ಎಂದು ಸಾಮಾಜಿಕ ಜಾಲತಾಣದಲ್ಲಿ ದೂರಿದೆ. ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ರಾಜ್ಯದ ಜನರ ಗಮನವನ್ನು ಬೇರೆಡೆ ಸೆಳೆಯಲು

ಸರ್ಕಾರ ಇಂತಹ ನಿರ್ಧಾರಗಳನ್ನು ಕೈಗೊಳ್ಳುತ್ತಿದ್ದು, ಸರ್ಕಾರದ ವಿರುದ್ಧ ಹೋರಾಟ ಮುಂದುವರೆಸಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

<><*<><>*><>

ಕೇಂದ್ರ ಗೃಹ ಸಚಿವ ಅಮಿತ್ ಶಾ ಇಂದು ಬೆಂಗಳೂರಿಗೆ ಆಗಮಿಸಲಿದ್ದು, ನಾಳೆ ನೆಲಮಂಗಲದ ಸಮೀಪ ನಡೆಯುವ ಬಿಜಿಎಸ್ ಮೆಡಿಕಲ್ ಕಾಲೇಜು ಮತ್ತು ಆಸ್ಪತ್ರೆ ಕಟ್ಟಡದ ಉದ್ಘಾಟನೆ ಕಾರ್ಯಕ್ರಮದಲ್ಲಿ ಭಾಗಿಯಾಗಲಿದ್ದಾರೆ. ಬಡ ಜನರಿಗೆ ಉಚಿತ ವೈದ್ಯಕೀಯ ಚಿಕಿತ್ಸೆ ನೀಡಲಾಗುತ್ತಿರುವ ಬಿಜಿಎಸ್ ಆಸ್ಪತ್ರೆಯನ್ನು ೯೩೦ ಹಾಸಿಗೆಗಳ ಬಹು ವಿಶೇಷ ಆಸ್ಪತ್ರೆಯನ್ನಾಗಿ ವಿಸ್ತರಿಸಲಾಗಿದೆ. ಆಸ್ಪತ್ರೆಯು ವಿಶೇಷ ತೀವ್ರ ನಿಗಾಘಟಕ ಹಾಗೂ ಅತ್ಯಾಧುನಿಕ ವೈದ್ಯಕೀಯ ಸೇವೆ ಒದಗಿಸಲಿದೆ. ಸಮಾರಂಭದಲ್ಲಿ ಕೇಂದ್ರ ಸಚಿವರಾದ ಹೆಚ್.ಡಿ. ಕುಮಾರಸ್ವಾಮಿ, ವಿ. ಸೋಮಣ್ಣ, ಸಚಿವ ಶರಣಪ್ರಕಾಶ್ ಸೇರಿದಂತೆ ಹಲವು ಗಣ್ಯ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ.

<><*<><>*><>

ಭಾರತದ ಕಾಫಿ ರಫ್ತು ಕಳೆದ ೫ ವರ್ಷದಲ್ಲಿ ಗಣನೀಯ ಬೆಳವಣಿಗೆ ಸಾಧಿಸಿದ್ದು, ಶೇಕಡ ೪೦ರಷ್ಟು ವೃದ್ಧಿಯನ್ನು ಸಾಧಿಸಿದೆ ಎಂದು ಕಾಫಿಬೋರ್ಡ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಎಂ. ಕೂರ್ಮಾರಾವ್ ತಿಳಿಸಿದ್ದಾರೆ. ಕಾಫಿ ಮಂಡಳಿಗೆ ಇಂದು ನವದೆಹಲಿಯ ಮಾಧ್ಯಮ ತಂಡ ಭೇಟಿ ನೀಡಿದ ವೇಳೆ ಮಾತನಾಡಿದ ಅವರು, ಭಾರತದ ಶೇಕಡ ೪೬ ರಷ್ಟು ಪ್ರತಿಶತ ಕಾಫಿ  ಯುರೋಪಿಯನ್ ಒಕ್ಕೂಟದ ರಾಷ್ಟ್ರಗಳಿಗೆ ರಫ್ತಾಗುತ್ತಿದೆ. ಇದರ ಜೊತೆಗೆ ಭಾರತದ ಕಾಫಿಯನ್ನು ಬ್ರಾಂಡ್ ಇಂಡಿಯಾ ಕಾಫಿ ಮೂಲಕ ಪ್ರಚುರಪಡಿಸಲಾಗುತ್ತಿದೆ ಎಂದು ತಿಳಿಸಿದ್ದಾರೆ.

ದೇಶದಲ್ಲಿ ಸುಮಾರು ೪.೯೦ ಲಕ್ಷ ಹೆಕ್ಟೇರ್‌ನಲ್ಲಿ ಕಾಫಿ ಬೆಳೆಯಲಾಗುತ್ತಿದ್ದು, ಮಧ್ಯಪ್ರಾಚ್ಯ ರಾಷ್ಟ್ರಗಳಾದ ಕೊರಿಯಾ, ಜಪಾನ್‌ನಲ್ಲಿ ಭಾರತೀಯ ಕಾಫಿಗೆ ಬೇಡಿಕೆ ಹೆಚ್ಚಾಗುತ್ತಿದೆ. ಆಂಧ್ರ, ಒಡಿಶಾ, ಈಶಾನ್ಯ ರಾಜ್ಯಗಳಲ್ಲಿ ಕಾಫಿ ಬೆಳಯುವ ಬಗ್ಗೆ ಪ್ರಯೋಗ ನಡೆಯುತ್ತಿದೆ ಎಂದು ಅವರು ಮಾಹಿತಿ ನೀಡಿದ್ದಾರೆ. ಇದೇ ವೇಳೆ ಮಾಧ್ಯಮ ತಂಡ ಕಾಫಿ ಸಂಸ್ಕರಣಾ ಘಟಕ, ಪ್ರಯೋಗಾಲಯ ಹಾಗೂ ಸಂಶೋಧನಾ ಕೇಂದ್ರಕ್ಕೂ ಭೇಟಿ ನೀಡಿ ಪರಿಶೀಲನೆ ನಡೆಸಿದರು.

<><*<><>*><>

ಕಂದಾಯ ಸಚಿವ ಕೃಷ್ಣ ಬೈರೇಗೌಡ ಇಂದು ಬೆಂಗಳೂರಿನ ದಕ್ಷಿಣ ತಾಲೂಕು ಕಚೇರಿಗೆ ದಿಢೀರ್ ಭೇಟಿ ನೀಡಿದ್ದಾರೆ. ಈ ವೇಳೆ ಅಲ್ಲಿನ ಸಿಬ್ಬಂದಿಯ ಕಾರ್ಯವೈಖರಿ, ಕರ್ತವ್ಯ ಲೋಪ, ಬೇಜವಾಬ್ದಾರಿತನ ಹಾಗೂ ಭ್ರಷ್ಟಾಚಾರದ ಬಗ್ಗೆ ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡಿದ್ದಾರೆ. ಇದೇ ವೇಳೆ ಜಿಲ್ಲಾಧಿಕಾರಿ ಜಗದೀಶ್ ಅವರೊಂದಿಗೆ ಅಧಿಕಾರಿಗಳ ಕೆಲಸ ಕಾರ್ಯಗಳು, ಹಾಜರಾತಿಯ ಬಗ್ಗೆ ಪರಾಮರ್ಶೆ ನಡೆಸಿದ್ದಾರೆ. ಅಧಿಕಾರಿಗಳ ಬೇಜವಾಬ್ದಾರಿತನದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

<><*<><>*><>

ಇದೇ ೨೧ರಂದು ವಿಶ್ವಾದ್ಯಂತ ಅಂತಾರಾಷ್ಟ್ರೀಯ ಯೋಗ ದಿನಾಚರಣೆ ನಡೆಯಲಿದ್ದು, ರಾಜ್ಯಾದ್ಯಂತ ಸಕಲ ಸಿದ್ಧತೆ ಕೈಗೊಳ್ಳಲಾಗುತ್ತಿದೆ. ವಿಜಯಪುರ ಜಿಲ್ಲಾಡಳಿತ ಹಾಗೂ  ಜಿಲ್ಲಾ ಆಯುಷ್ ಇಲಾಖೆಯು ಅಂತಾರಾಷ್ಟ್ರೀಯ ಯೋಗ ದಿನದ ಪ್ರಯುಕ್ತ ವಿವಿಧ ಯೋಗ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ. ಯೋಗವು ದೈಹಿಕ, ಮಾನಸಿಕ ಹಾಗೂ ಆಧ್ಯಾತ್ಮಿಕ ಆರೋಗ್ಯದ ಸರಳ ಸೂತ್ರವಾಗಿದೆ ಎಂದು ವಿಜಯಪುರದ ಯೋಗ ಶಿಕ್ಷಕಿ ಸುನಿತಾ ಬಿರಾದಾರ ಆಕಾಶವಾಣಿಯಲ್ಲಿ ಮಾಹಿತಿ ಹಂಚಿಕೊಂಡಿದ್ದಾರೆ.

ವಿಜಯನಗರ ಜಿಲ್ಲಾ ಪಂಚಾಯತ್ ಮತ್ತು ಆಯುಷ್ ಇಲಾಖೆ ಸೇರಿದಂತೆ ವಿವಿಧ ಸಂಘ-ಸಂಸ್ಥೆಗಳ  ಸಹಯೋಗದಲ್ಲಿ ಹೊಸಪೇಟೆಯ ಸ್ವತಂತ್ರ ಉದ್ಯಾನವನದಲ್ಲಿ ಯೋಗ ದಿನ ಆಯೋಜಿಸಲಾಗಿದೆ. ಗದಗ  ಜಿಲ್ಲಾಡಳಿತ ಹಾಗೂ  ಜಿಲ್ಲಾ ಆಯುಷ್ ಇಲಾಖೆ ಆಶ್ರಯದಲ್ಲಿ ಇಂದು ಯೋಗ ನಡಿಗೆ ಕಾರ್ಯಕ್ರಮ ಜರುಗಿತು.  ಗದಗ ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ಯೋಗ ನಡಿಗೆಗೆ  ಚಾಲನೆ ನೀಡಿ,  ಯೋಗವು ದೈಹಿಕ, ಮಾನಸಿಕ ಹಾಗೂ ಆಧ್ಯಾತ್ಮಿಕ ಆರೋಗ್ಯದ ಸರಳ ಸೂತ್ರವಾಗಿದೆ ಎಂದು ಹೇಳಿದ್ದಾರೆ. ಯೋಗ ದಿನದ ಅಂಗವಾಗಿ ಬೆಂಗಳೂರಿನ ರಾಷ್ಟ್ರೀಯ ಮಾನಸಿಕ ಆರೋಗ್ಯ

ಮತ್ತು ನ್ಯೂರೋಸೈನ್ಸ್ ಸಂಸ್ಥೆ- ನಿಮ್ಹಾನ್ಸ್, ಯೋಗದ ಮೂಲಕ ಮಾನಸಿಕ ಆರೋಗ್ಯ ಉತ್ತೇಜಿಸುವ ಉದ್ದೇಶದ ಕಾರ್ಯಕ್ರಮಗಳನ್ನು ಆಯೋಜಿಸಿದೆ. ಅಂದು ಬೆಳಗ್ಗೆ ೭ ರಿಂದ ೮ ಗಂಟೆಯವರೆಗೆ ನಿಮ್ಹಾನ್ಸ್ ಜಿಮ್ಖಾನಾ ಮೈದಾನದಲ್ಲಿ ಸಾಮೂಹಿಕ ಯೋಗ ಕಾರ್ಯಕ್ರಮ ಯೋಗ ಸಂಗಮ ನಡೆಯಲಿದೆ. ನಿಮ್ಹಾನ್ಸ್‌ನ ವಿವಿಧ ವಿಭಾಗಗಳ ತಜ್ಞರು ಹಿರಿಯರ ಮಾನಸಿಕ ಆರೋಗ್ಯದಲ್ಲಿ ಯೋಗ ಮತ್ತು ಜೀವನಶೈಲಿಯ ಮಹತ್ವದ ಕುರಿತು ವಿಚಾರ ವಿನಿಮಯ ನಡೆಸಲಿದ್ದಾರೆ.

<><*<><>*><>

ಬಳ್ಳಾರಿ ತಾಲೂಕಿನ ಮಕ್ಕಳ ಸಾಹಿತಿ ಡಾ. ಶಿವಲಿಂಗಪ್ಪ ಹಂದಿಹಾಳು ಅವರ ಮಕ್ಕಳಕಥೆಗಳ "ನೋಟ್‌ಬುಕ್" ಕೃತಿಗೆ ೨೦೨೫ನೇ ಸಾಲಿನ ಕೇಂದ್ರ ಸಾಹಿತ್ಯ ಅಕಾಡೆಮಿಯ ಬಾಲ ಸಾಹಿತ್ಯ ಪುರಸ್ಕಾರ ದೊರೆತಿದೆ. ಮಕ್ಕಳ ಸಾಹಿತ್ಯಕ್ಕೆ ಕೇಂದ್ರ ಅಕಾಡೆಮಿಯ ಪ್ರಶಸ್ತಿ ಪಡೆದ ಜಿಲ್ಲೆಯ ಪ್ರಥಮ ಸಾಹಿತಿ ಎಂಬ ಹೆಗ್ಗಳಿಕೆಗೆ ಇವರು ಪಾತ್ರರಾಗಿದ್ದಾರೆ. ಮಕ್ಕಳ ಸಾಹಿತ್ಯ, ಅನುವಾದ ಸೇರಿದಂತೆ ೧೧ ಕೃತಿಗಳನ್ನು ಶಿವಲಿಂಗಪ್ಪ ಹಂದಿಹಾಳು ರಚಿಸಿದ್ದು. ನೋಟ್ ಬುಕ್ ಕೃತಿ ೨೦೨೧ರಲ್ಲಿ ಪ್ರಕಟಗೊಂಡಿದೆ. ಪ್ರಶಸ್ತಿ ಬಂದಿರುವುದಕ್ಕೆ ಆಕಾಶವಾಣಿ ಜೊತೆ ಸಂತಸ ಹಂಚಿಕೊಂಡ ಅವರು, ಮಕ್ಕಳ ಸಾಹಿತ್ಯ ಅನ್ನೋದು ಕೇವಲ ಮಕ್ಕಳಿಗಷ್ಟೇ ಸಂಬಂಧಿಸಿದಲ್ಲ ಎಂದು ತಿಳಿಸಿದ್ದಾರೆ.

ಧ್ವನಿ : ಡಾ. ಶಿವಲಿಂಗಪ್ಪ ಹಂದಿಹಾಳು (೩೮ ಸೆಕೆಂಡ್‌ಗಳು)

<><*<><>*><>

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಮಾದಕ ವಸ್ತುಗಳ ಬಳಕೆ ಮತ್ತು ಮಾರಾಟ ನಿಯಂತ್ರಿಸುವ ನಿಟ್ಟಿನಲ್ಲಿ ವಿಶೇಷ ಕ್ರಮಗಳನ್ನು ಕೈಗೊಳ್ಳುವಂತೆ ಪೊಲೀಸ್ ಇಲಾಖೆಗೆ ಸೂಚಿಸಲಾಗಿದೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ. ಮಂಗಳೂರಿನಲ್ಲಿ ಮಾತನಾಡಿದ ಅವರು, ಮಾದಕ ವಸ್ತುಗಳ ಪರೀಕ್ಷೆಗೆ ಬೆಂಗಳೂರಿಗೆ ಸ್ಯಾಂಪಲ್ ಕಳುಹಿಸುವ ಬದಲು ದಕ್ಷಿಣಕನ್ನಡ ಜಿಲ್ಲೆ ಸೇರಿದಂತೆ ಎಲ್ಲಾ ಜಿಲ್ಲಾ ಆಸ್ಪತ್ರೆಗಳಲ್ಲಿ ಪರೀಕ್ಷೆ ನಡೆಸುವ ಕುರಿತಂತೆ ಚಿಂತನೆ ನಡೆಸಲಾಗಿದೆ ಎಂದು ಹೇಳಿದ್ದಾರೆ. ಮಕ್ಕಳಲ್ಲಿ ಮಾದಕ ದ್ರವ್ಯ ಮತ್ತು ಮಾದಕ ವಸ್ತುಗಳ ಸೇವನೆ ತಡೆಗಟ್ಟಲು ಗ್ರಾಮ ಸಭೆಯಲ್ಲಿ ಜಾಗೃತಿ ಮೂಡಿಸಿ ಎಂದು ಮೈಸೂರು ಜಿಲ್ಲಾಧಿಕಾರಿ ಜಿ ಲಕ್ಷ್ಮೀ ಕಾಂತ ರೆಡ್ಡಿ ಅಧಿಕಾರಿಗಳಿಗೆ ಸೂಚಿಸಿದ್ದಾರೆ.ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಇಂದು ನಾರ್ಕೋ ಸಮನ್ವಯ ಕೇಂದ್ರ ಜಿಲ್ಲಾ ಮಟ್ಟದ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಈ ಕುರಿತು ಶಾಲಾ ಕಾಲೇಜುಗಳಲ್ಲಿ ಅರಿವು ಮೂಡಿಸಬೇಕು ಎಂದು ತಿಳಿಸಿದ್ದಾರೆ.

<><*<><>*><>

ಬೆಂಗಳೂರು ಸಹಕಾರ ಹಾಲು ಒಕ್ಕೂಟದ ಅಧ್ಯಕ್ಷ ಹಾಗೂ ಉಪಾಧ್ಯಕ್ಷ ಸ್ಥಾನದ ಚುನಾವಣೆಯಲ್ಲಿ ಡಿ.ಕೆ. ಸುರೇಶ್ ಸಂಘದ ಅಧ್ಯಕ್ಷರಾಗಿ ಹಾಗೂ ಕುದೂರು ರಾಜಣ್ಣ ಅವರು ಉಪಾಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಬಮೂಲ್ ಆಡಳಿತ ಮಂಡಳಿ ಅಧ್ಯಕ್ಷ ಸ್ಥಾನಕ್ಕೆ ಮಾಜಿ ಸಂಸದ ಡಿ.ಕೆ ಸುರೇಶ್ ನಾಮಪತ್ರ ಸಲ್ಲಿಸಿದ್ದರು. ಈ ಸ್ಥಾನಕ್ಕೆ ಬೇರೆ ಯಾರೂ ಉಮೇದುವಾರಿಕೆ ಸಲ್ಲಿಸದ ಕಾರಣ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಈ ವೇಳೆ ಮಾತನಾಡಿದ ಅವರು, ಇಂದು ನಡೆದ ಚುನಾವಣೆಯಲ್ಲಿ ಸಹಕಾರ ಸಂಸ್ಥೆಯ ಜವಾಬ್ದಾರಿಯನ್ನು ನೀಡಲಾಗಿದೆ. ಈ ಒಕ್ಕೂಟದ ಹಾಲು ಉತ್ಪಾದಕರು, ರೈತ ಬಾಂಧವರು ನಮ್ಮ ಮೇಲೆ ನಿರೀಕ್ಷೆ ಇಟ್ಟು ತಮ್ಮ ಅಭ್ಯರ್ಥಿಗಳನ್ನು ಗೆಲ್ಲಿಸಿದ್ದಾರೆ. ರಾಜ್ಯಾದ್ಯಂತ ಪರಿಸರ ಸ್ನೇಹಿ ಹಾಲಿನ ಪ್ಯಾಕೆಟ್ ಪರಿಚಯಿಸುವ ಚಿಂತನೆ ನಡೆಸಲಾಗಿದೆ ಎಂದು ಹೇಳಿದ್ದಾರೆ. ಮುಂದಿನ ಆಡಳಿತ ಮಂಡಳಿಯಲ್ಲಿ ಇದರ ಸಾಧಕ ಬಾಧಕಗಳನ್ನು ವಿಸ್ತೃತವಾಗಿ ಚರ್ಚೆ ಮಾಡಿ ತೀರ್ಮಾನ ಮಾಡಲಾಗುವುದು ಎಂದು ತಿಳಿಸಿದ್ದಾರೆ.

<><*<><>*><>